ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 22/09/2019

# ಮಹಾರಾಷ್ಟ್ರ-ಹರ್ಯಾಣದಲ್ಲಿ ಚುನಾವಣೆ ಘೋಷಣೆ

ನವದೆಹಲಿ: ಬಹುನಿರೀಕ್ಷಿತ ಮಹಾರಾಷ್ಟ್ರ ಮತ್ತು ಹರ್ಯಾಣ ವಿಧಾನಸಭಾ ಚುನಾವಣಾ ವೇಳಾಪಟ್ಟಿಯನ್ನು ಕೇಂದ್ರ ಚುನಾವಣಾ ಆಯೋಗ ಇದೀಗ ಪ್ರಕಟಿಸಿದೆ. ಅಕ್ಟೋಬರ್ 21ರಂದು ಮತದಾನ ನಡೆಯಲಿದ್ದು ಮೂರು ದಿನಗಳ ಬಳಿಕ ಫಲಿತಾಂಶ ಹೊರಬೀಳಲಿದೆ. ಇದೇ ವೇಳೆ 18 ರಾಜ್ಯಗಳ ಒಟ್ಟು 64 ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯನ್ನೂ ಘೋಷಿಸಲಾಗಿದೆ. ಮುಖ್ಯ ಚುನಾವಣಾ ಆಯುಕ್ತ ಸುನಿಲ್ ಅರೋರಾ ನವದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಅಧಿಕೃತವಾಗಿ ಚುನಾವಣೆ ನಿರ್ಧಾರವನ್ನು ಪ್ರಕಟಿಸಿದರು.



ಕರ್ನಾಟಕದ 15 ಕ್ಷೇತ್ರಗಳು ಸೇರಿದಂತೆ ಒಟ್ಟು 64 ವಿಧಾನಸಭಾ ಕ್ಷೇತ್ರಗಳು ಹಾಗೂ ಬಿಹಾರದ ಸಮಸ್ತಿಪುರ ಲೋಕಸಭಾ ಕ್ಷೇತ್ರದಲ್ಲೂ ಏಕಕಾಲಕ್ಕೆ ಉಪಚುನಾವಣೆಗಳು ನಡೆಯುವುದೆಂದು ಅವರು ವಿವರಿಸಿದರು. ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತೊಮ್ಮೆ ಜಯಭೇರಿ ಬಾರಿಸಿ ಪ್ರಧಾನಿ ನರೇಂದ್ರ ಮೋದಿ 2ನೇ ಬಾರಿ ಅಧಿಕಾರ ಗದ್ದುಗೆಯೇರಿದ ಬಳಿಕ ನಡೆಯುತ್ತಿರುವ ಮೊದಲ ಪ್ರಮುಖ ಚುನಾವಣೆ ಇದಾಗಿದೆ. ತ್ರಿವಳಿ ತಲಾಖ್ ಕಾಯ್ದೆ ಮತ್ತು ಜಮ್ಮು-ಕಾಶ್ಮೀರ ವಿಶೇಷ ಸ್ಥಾನಮಾನ ರದ್ದು ನಿರ್ಧಾರಗಳ ಹಿನ್ನೆಲೆಯಲ್ಲಿ ಎನ್‌ಡಿಎ ಮೈತ್ರಿಕೂಟ ಮತದಾರರಿಂದ ಉತ್ತಮ ಬೆಂಬಲದ ನಿರೀಕ್ಷೆಯಲ್ಲಿದೆ. ಮಹಾರಾಷ್ಟ್ರದಲ್ಲಿ ಕಳೆದ ಬಾರಿ ಪ್ರತ್ಯೇಕವಾಗಿ ಸ್ಪರ್ಧಿಸಿದ್ದ ಬಿಜೆಪಿ ಮತ್ತು ಶಿವಸೇನೆ ಈ ಬಾರಿ ಒಟ್ಟಾಗಿ ಅಖಾಡಕ್ಕಿಳಿಯಲು ಸಜ್ಜಾಗಿವೆ. ಅಂತೆಯೇ ಕಾಂಗ್ರೆಸ್ ಮತ್ತು ಎನ್‌ಸಿಪಿ ಸಹ ಒಗ್ಗಟ್ಟಾಗಿ ಸೆಣಸಲು ಮುಂದಾಗಿವೆ. ಹರ್ಯಾಣದಲ್ಲಿ ಅಸ್ಸಾಂ ಮಾದರಿ ರಾಷ್ಟ್ರೀಯ ಪೌರತ್ವ ನೋಂದಣಿ ಪ್ರಸ್ತಾಪ ಚುನಾವಣೆಯ ಪ್ರಮುಖ ಚರ್ಚೆಯ ವಿಷಯವಾಗಲಿದೆ.